# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 831
2. ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್
3. ಉತ್ತರಿಸಬೇಕಾದ ದಿನಾಂಕ : 23.02.2023
4. ಉತ್ತರಿಸುವ ಸಚಿವರು : ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಜಿಲ್ಲೆಯಲ್ಲಿರುವ ಭೋಸಗಾ ಕೆರೆ ಮತ್ತು ಖಾಜಾ ಕೊಟ್ನೂರು ಕೆರೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; | ಹೌದು. |
| ಆ | ಹಾಗಿದ್ದಲ್ಲಿ, ಸದರಿ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು ಹಾಗೂ ಈ ಕೆರೆಗಳ ವಿಸ್ತೀರ್ಣ ಎಷ್ಟು; (ವಿವರ ನೀಡುವುದು) | 1. ಕಲಬುರಗಿ ಜಿಲ್ಲೆ, ಕಲಬುರಗಿ ನಗರದ ಭೋಸಗಾ ಕೆರೆಯು ನಗರಾಭಿವೃದ್ಧಿ ಇಲಾಖೆಯ ವ್ಯಾಪ್ತಿಗೆ ಬರುತ್ತದೆ. ಕೆರೆ ಅಂಗಳದ ವಿಸ್ತೀರ್ಣ 178.00 ಹೆಕ್ಟೇರ್, ಸದರಿ ಕೆರೆಯ ಸೌಂದರ್ಯೀಕರಣ ಮತ್ತು ಅಭಿವೃದ್ಧಿ ಕಾಮಗಾರಿಯನ್ನು ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರಧ ಅನುದಾನದಡಿ ರೂ.500.00 ಲಕ್ಷ ಅಂದಾಜು ಮೊತ್ತದಲ್ಲಿ ಕೈಗೊಳ್ಳಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.<br><br>ಅಲ್ಲದೆ, ಸಣ್ಣ ನೀರಾವರಿ ಇಲಾಖೆಯಿಂದ "ಕಲಬುರಗಿ ಜಿಲ್ಲೆ ಕಲಬುರಗಿ ದಕ್ಷಿಣ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿಗಾಗಿ ಸರಣಿ ಕೆರೆಗಳನ್ನು ತುಂಬಿಸುವ ಯೋಜನೆಯನ್ನು" ರೂ.19771.00 ಲಕ್ಷ ಅಂದಾಜು ಮೊತ್ತದಲ್ಲಿ ಕೈಗೊಳ್ಳಲಾಗಿದ್ದು, ಸದರಿ ಯೋಜನೆ ಅಡಿ ಭೋಸಗಾ ಕೆರೆಯನ್ನು ತುಂಬಿಸುವ ಕಾಮಗಾರಿಯು ಸೇರಿದ್ದು, ಅದರಲ್ಲಿ, ಸದರಿ ಕೆರೆಯ ಅಭಿವೃದ್ಧಿಗಾಗಿ ರೂ.1580.39 ಲಕ್ಷ ಅಂದಾಜು ಮೊತ್ತದ ಅಭಿವೃದ್ಧಿ ಕಾಮಗಾರಿಗೆ ಅವಕಾಶ ಕಲ್ಪಿಸಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.<br><br>2. ಕಲಬುರಗಿ ಜಿಲ್ಲೆ, ಕಲಬುರಗಿ ನಗರದ ಖಾಜಾಕೋಟನೂರ ಕೆರೆಯು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುತ್ತದೆ. ಕೆರೆ ಅಂಗಳದ ವಿಸ್ತೀರ್ಣ 218.18 ಹೆಕ್ಟೇರ್, ಸದರಿ ಕೆರೆಯ ಸೌಂದರ್ಯೀಕರಣ ಮತ್ತು ಅಭಿವೃದ್ಧಿ ಕಾಮಗಾರಿಯನ್ನು ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರಧ ಅನುದಾನದಡಿ ರೂ.500.00 ಲಕ್ಷ ಅಂದಾಜು ಮೊತ್ತದಲ್ಲಿ ಕೈಗೊಳ್ಳಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. |
| ಇ | ಭೋಸಗಾ ಕೆರೆ ಮತ್ತು ಖಾಜಾ ಕೊಟ್ನೂರು ಕೆರೆಗಳ ಅಭಿವೃದ್ಧಿಗೆ ಬೇಕಾದ ಅನುದಾನ ಎಷ್ಟು; ಮತ್ತು ಕಾಮಗಾರಿಯನ್ನು ಯಾವಾಗ ಕೈಗೊಳ್ಳಲಾಗುವುದು? (ವಿವರ ನೀಡುವುದು) | |

ಕಡತ ಸಂಖ್ಯೆ: ಎಂಐಡಿ 23 ಎಲ್ಸಿಕ್ಯೂ 2023

(ಜೆ.ಸಿ. ಮಾಧುಸ್ವಾಮಿ)
ಕಾನೂನು ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು.